6) ದೌರ್ಜನ್ಯದಲ್ಲಿ ನೊಂದ ಕಡಕೋಳ ಗ್ರಾಮದ ಶ್ರೀ ಛಾಯಪ್ಪ ಅಕ್ಕಲಕೋಟ ಇವರಿಗೆ ಸಮಾಜ ಕಲ್ಯಾಣ ಇಲಾಖೆಯ ಮುಖಾಂತರ ಪರಿಹಾರಧನ ರೂ 12,500/–ಗಳನ್ನು ಮಂಜೂರಿಸಿ ಚೆಕ್ ವಿತರಿಸಲಾಗಿದೆ

7) ಗ್ರಾಮದ ಪರಿಶಿಷ್ಟ ಜಾತಿ ಕಾಲೋನಿಯಲ್ಲಿ ಗ್ರಾಮ ಪಂಚಾಯತ್‌ನಿಂದ ಫರಸಿ ಹಾಕುರ ಕೆಲಸವನ್ನು ರೂ 50,000/–ಗಳ ಅಂದಾಜಿನಲ್ಲಿ ತೆಗೆದುಕೊಂಡಿದ್ದು ಸದರಿ ಕೆಲಸ ಮುಕ್ತಾಯವಾಗಿದೆ ಸದರಿ ಕೆಲಸವನ್ನು ಕೂಡ ಪರಿಶಿಷ್ಟ ಜಾತಿ ಜನರಿಗೆ ಕೊಟ್ಟು ಮಾಡಿಸಲಾಗಿದೆ

8) ಕಡಕೋಳ ಗ್ರಾಮದಿಂದ ದೋಣಿಗೆ ಹೋಗುವ ರಸ್ತೆ ಕಾಮಗಾರಿ ನಿರ್ವಹಣೆಯ ಸಂಬಂಧಿಸಿದಂತೆ ರೂ 2 00 ಲಕ್ಷ ಅನುದಾನದಲ್ಲಿ ಕಾಮಗಾರಿಯು ಪ್ರಾರಂಭದ ಹಂತದಲ್ಲಿದೆ

9) ಸಮಾಜ ಕಲ್ಯಾಣ ಇಲಾಖೆಯಿಂದ ಡಾ ಬಿ ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ ವಿಜಾಪೂರ ಇವರಿಗೆ ಬಿಡುಗಡೆಯಾದ ಅನುದಾನ ರೂ 8 30 ಲಕ್ಷಗಳಲ್ಲಿ ಕಡಕೋಳ ಗ್ರಾಮದಲ್ಲಿ ಹೈನುಗಾರಿಕೆ ಕಾರ್ಯಕ್ರಮವನ್ನು ಕೈಗೆತ್ತಿಕೊಂಡು ನೊಂದ ಪರಿಶಿಷ್ಟ ಜಾತಿ ಜನಾಂಗದವರಿಗೆ ಸ್ವಯಂ ಉದ್ಯೋಗ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು ಸದರಿ ಕಾರ್ಯಕ್ರಮದಡಿ ಸದ್ಯ ಫಲಾನುಭವಿಗಳ ಆಯ್ಕೆ ನಡೆದಿದ್ದು ಪ್ರಗತಿಯಲ್ಲಿರುತ್ತದೆ

10) ಡಾ ಬಿ ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಗ್ರಾಮದ ಪರಿಶಿಷ್ಟ ಜಾತಿ ಜನರ ಸ್ವಯಂ ಉದ್ಯೋಗಕ್ಕಾಗಿ ಆಡು ಸಾಕಾಣಿಕೆ, ಬಟ್ಟೆ ವ್ಯಾಪಾರ, ಚರ್ಮ ಕೈಗಾರಿಕೆ, ಸೈಕಲ್‌ಶಾಪ್, ಚಹಾದ ಅಂಗಡಿ ವಿವಿಧ ಬಗೆಯ ವ್ಯಾಪಾರಕ್ಕಾಗಿ ಸಾಲದ ರೂಪದಲ್ಲಿ ರೂ 17 71 ಲಕ್ಷ ಅನುದಾನ 80 ದಲಿತರ ಫಲಾನುಭವಿಗಳಿಗೆ ಸಾಲ ಪತ್ರವನ್ನು ಹಂಚಲಾಗಿದೆ

603 (1053) ಶ್ರೀ ಮಲ್ಲಿಕಾರ್ಜುನ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯ ಬಸವಕಲ್ಯಾಣ ಮತಕ್ಷೇತ್ರದ ವ್ಯಾಪ್ತಿಯಲ್ಲಿ ವಿವಿಧ ವರ್ಗಗಳಿಗೆ ಸೇರಿದ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರ ವಸತಿ ನಿಲಯಗಳ ಸಂಖ್ಯೆ ಎಷ್ಟು? (ಪೂರ್ಣ ವಿವರಗಳನ್ನು ಒದಗಿಸುವುದು)

ಆ) ಈ ಪೈಕಿ ಎಷ್ಟು ವಸತಿ ನಿಲಯಗಳಿಗೆ ಸ್ವಂತ ಕಟ್ಟಡವಿದೆ ಹಾಗೂ ಬಾಡಿಗೆ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿರುವ ನಿಲಯಗಳೆಷ್ಟು?

ಇ) ಬಾಡಿಗೆ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಸತಿ ನಿಲಯಗಳಿಗೆ ಸ್ವಂತ ಕಟ್ಟಡದ ವ್ಯವಸ್ಥೆಯನ್ನು ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಈ) ಸ್ವಂತ ಕಟ್ಟಡವನ್ನು ನಿರ್ಮಿಸಬೇಕೆಂದು ಕೋರಿ ಸರ್ಕಾರಕ್ಕೆ ಬಂದಿರುವ ಮನವಿಗಳೆಷ್ಟು?

ಉ) ಈ ಮನವಿ ಪತ್ರಗಳು ಯಾರಿಂದ ಬಂದಿವೆ, ಇವುಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಬಾಲಚಂದ್ರ ಲ ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು)

ಅ) 1 ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಇರುವ ವಿದ್ಯಾರ್ಥಿನಿಲಯಗಳ ಸಂಖ್ಯೆ 9

2 ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಇರುವ ವಿದ್ಯಾರ್ಥಿನಿಲಯಗಳ ಸಂಖ್ಯೆ 14

3 ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಇರುವ ವಿದ್ಯಾರ್ಥಿನಿಲಯಗಳ ಸಂಖ್ಯೆ 1

ಆ)	ಇಲಾಖೆ	ಸ್ವಂತ ಕಟ್ಟಡಗಳ ಸಂಖ್ಯೆ	ಬಾಡಿಗೆ ಕಟ್ಟಡಗಳ ಸಂಖ್ಯೆ
1	ಸಮಾಜ ಕಲ್ಯಾಣ ಇಲಾಖೆ	6	3
2	ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ	11	3
3	ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ	–	1

ಇ) ನಿವೇಶನ ಮತ್ತು ಅನುದಾನ ಲಭ್ಯತೆಯನ್ನು ಅನುಸರಿಸಿ ಸ್ವಂತ ಕಟ್ಟಡದ ವ್ಯವಸ್ಥೆ ಹೊಂದಲು ಕ್ರಮ ಕೈಗೊಳ್ಳಲಾಗುತ್ತಿದೆ

ಈ) ಒಂದು

ಉ) ಮಾನ್ಯ ಶಾಸಕರು ಬಸವಕಲ್ಯಾಣ ಇವರಿಂದ ಬಂದಿರುತ್ತದೆ ನಿವೇಶನ ಮತ್ತು ಅನುದಾನ ಲಭ್ಯತೆಯನ್ನು ಅನುಸರಿಸಿ ಕಟ್ಟಡ ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದು

ವಿಧಾನಸಭಾ ಸದಸ್ಯರಾದ ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಖೂಬಾ ರವರ ಪ್ರಶ್ನೆ ಸಂಖ್ಯೆ 1053ರ ಉತ್ತರಕ್ಕೆ ಸಂಬಂಧಿಸಿದಂತೆ

ಅನುಬಂಧ – 1

1 ಸಮಾಜ ಕಲ್ಯಾಣ ಇಲಾಖೆ

ಕ್ರಮ ಸಂಖ್ಯೆ	ವಿದ್ಯಾರ್ಥಿನಿಲಯಗಳ ವಿವರ
1	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಬಸವಕಲ್ಯಾಣ
2	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಮುಡಬಿ
3	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ರಾಜೇಶ್ವರ
4	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಯರಭಾಗ
5	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಬಸವಕಲ್ಯಾಣ
6	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಮುಚ್ಚಳಂಬ
7	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಮೈಸಲಗ
8	ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿನಿಲಯ, ಬಸವಕಲ್ಯಾಣ
9	ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯ, ಬಸವಕಲ್ಯಾಣ

2. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಕ್ರಮ ಸಂಖ್ಯೆ	ವಿದ್ಯಾರ್ಥಿನಿಲಯಗಳ ವಿವರ
1	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಬಸವಕಲ್ಯಾಣ
2	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ರಾಜೇಶ್ವರ

3	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಕಿಟ್ಟ
4	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಹಿಪ್ಪರಗಾಬಾಗ
5	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಮುಡಬಿ
6	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಹಾರಕೂಡ
7	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಕೋಹಿನೂರ
8	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಮಂಟಾಳ
9	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಗದಲೇಗಾಂವ
10	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ನಾರಾಯಣಪುರ
11	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಉಜಳಂ
12	ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯ, ಬಸವಕಲ್ಯಾಣ
13	ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ, ಬಸವಕಲ್ಯಾಣ
14	ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ, ಬಸವಕಲ್ಯಾಣ

3 ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ

ಕ್ರಮ ಸಂಖ್ಯೆ	ವಿದ್ಯಾರ್ಥಿನಿಲಯಗಳ ವಿವರ
1	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಬಸವಕಲ್ಯಾಣ

604 (1054) ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವಕಲ್ಯಾಣ ಮತಕ್ಷೇತ್ರದಲ್ಲಿ ಇರುವ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರ ವಿದ್ಯಾರ್ಥಿನಿಯರ ವಸತಿನಿಲಯಗಳ ಸಂಖ್ಯೆ ಎಷ್ಟು? ಇವು ಎಲ್ಲೆಲ್ಲಿವೆ?

ಆ) ಈ ಮತಕ್ಷೇತ್ರದಲ್ಲಿ ವಿದ್ಯಾರ್ಥಿನಿಯರ ವಸತಿ ನಿಲಯವನ್ನು ಪ್ರಾರಂಭಿಸಲು ಅನುಮತಿಯನ್ನು ಕೋರಿ ಅನ್ನಪೂರ್ಣೇಶ್ವರಿ ಮಹಿಳಾ ಮಂಡಳದ ವತಿಯಿಂದ ಸರ್ಕಾರಕ್ಕೆ ಮನವಿ ಬಂದಿರುವುದು ನಿಜವಲ್ಲವೇ?